ಓ.ಎಸ್..ನಂ.14/2020 ಪಿ.ಡಬ್ಲೂಃ 1

ದಿನಾಂಕಃ 21.10.2021 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು

ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಾದ ಶ್ರೀ. ಎಸ್.ಎ. ವಕೀಲರಿಂದ

ನಾನು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿ ಹೇಳಿರುವ ಸಂಗತಿಗಳು ಸತ್ಯವಾಗಿರುತ್ತವೆ. ಅವುಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಸದರಿ ಅಂಶಗಳನ್ನು ವಕೀಲರಿಗೆ ನಾನೇ ಹೇಳಿ ಬರೆಸಿರುತ್ತೇನೆ. ನಾನು ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಶಾನೆಯಾಗಿ ಗುರುತಿಸಲು ಕೋರುತ್ತೇನೆ.

ವಂಶವೃಕ್ಷವನ್ನು ಹಾಜರುಪಡಿಸಿದ್ದು, ನಿಪಿ 1, ದಿನಾಂಕ : 23.12.1996 ರ ಕ್ರಯ ಪತ್ರವನ್ನು ಹಾಜರುಪಡಿಸಿದ್ದು, ನಿಪಿ 2, ದಿನಾಂಕ : 24.07.2000 ರ ಕ್ರಯಪತ್ರವನ್ನು ಹಾಜರುಪಡಿಸಿದ್ದು, ನಿಪಿ 3, ದಿನಾಂಕ : 08.02.2013 ರ ವಿಭಾಗ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ 4, ಎಂ.ಆರ್. 48 ಅನ್ನು ಹಾಜರುಪಡಿಸಿದ್ದು, ನಿಪಿ 5( ಐದು ಪುಟಗಳನ್ನೊಳಗೊಂಡಿರುತ್ತದೆ), ಎರಡು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ನಿಪಿ 6 ಮತ್ತು 7, ಋಣಭಾರಪತ್ರವನ್ನು ಹಾಜರುಪಡಿಸಿದ್ದು ನಿಪಿ 8, ಹೊಳೆನರಸೀಪುರ ಉಪನೋಂಧಣಾಧಿಕಾರಿ ಕಚೇರಿ ವ್ಯಾಪ್ತಿಯ ಕೃಷಿ ಜಮೀನು ನಿವೇಶನ ಸ್ಥಿರಾಸ್ತಿಗಳ ಮೌಲ್ಯದ ದರಪಟ್ಟಿಗಳನ್ನು ಹಾಜರುಪಡಿಸಿದ್ದು ನಿಪಿ 9 (ಸದರಿ ದಾಖಲೆ 3 ಪುಟಗಳನ್ನೊಳಗೊಂಡಿರುತ್ತದೆ), ಅನುಮತಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ 10, ಮನೆಯ ನೀಲಿ ನಕ್ಷೆಯನ್ನು ಹಾಜರುಪಡಿಸಿದ್ದು ನಿಪಿ 11, ತೆರಿಗೆ ಪಾವತಿ ರಶೀದಿ ನಿಪಿ 12, ಭೂಮಾಪಕರು ನೀಡಿದಂತಹ ನಕ್ಷೆಯನ್ನು ಹಾಜರುಪಡಿಸಿದ್ದು ನಿಪಿ 13, ಅರ್ಜಿದಾರರು ಮಾಹಿತಿ ಕೋರಿ ಬರೆದಿದ್ದಂತಹ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ 14 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸ.ಇದೆ

(ಅಮರ್ ವಿ.ಎಲ್.)
ಸೀನಿಯರ್ ಸಿವಿಲ್ ಜಡ್ಜ್ ಮತ್ತು
ಜೆಎಂಎಫ್‌ಸಿ ಹೊಳೆನರಸೀಪುರ